# ಕರ್ನಾಟಕ ಸರ್ಕಾರದ ನಡವಳಿಗಳು

***ವಿಷಯು:-*** ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರೆ (ವಿಶೇಷ ದರ್ಜೆ) ಇವರುಗಳು ಅಮಾನತ್ತಿನಲ್ಲಿ ಕಳೆದ ಅವಧಿ ದಿನಾಂಕ:10.2.2012 ರಿಂದ 17.5.2012 ರವರಗೆ ಅವರ ಹಕ್ಕಿನಲ್ಲಿರುವ ಗಳಿಕೆ ರಜೆ ಮಂಜೂರು ಮಾಡುವ ಬಗ್ಗೆ-ಆದೇಶ.

***ಓದಲಾಗಿದೆ*** :

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 409 ಜಿಪಅ 11, ದಿನಾಂಕ:10.2.2012.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 409 ಜಿಪಅ 11 (ಭಾ), ದಿ:17.5.2012.
3. ಶ್ರೀ ಡಿ.ವೆಂಕಟರಮಣ ಮತ್ತು ಶ್ರೀ ಜಾಕೀರ್ ಹುಸೇನ್, ಇವರುಗಳ ಮನವಿ ದಿನಾಂಕ:30.5.2016

***ಪ್ರಸ್ತಾವನೆ:-***

ಮಹಾತ್ಮ ಗಾಂದಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2010-11 ನ ಸಾಲಿನಲ್ಲಿ ಎಂ.ಗೋನಾಳ್. ಗ್ರಾಮದಲ್ಲಿ ರಸ್ತೆ ಕಾಮಗಾರಿ ಮತ್ತು ಒಳಚರಂಡಿ ನಿರ್ಮಾಣದ ಕಾಮಗಾರಿಗೆ ಎರಡು ಅಂದಾಜು ಪಟ್ಟಿ ತಯಾರಿಸಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ, ಸುಳ್ಳು ಲೆಕ್ಕ ಪತ್ರಗಳನ್ನು ಬರೆದು ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆ ಎಂಬ ಆರೋಪಗಳಿಗೆ. ಸಂಬಂಧಿಸಿದಂತೆ ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರ (ವಿಶೇಷ ದರ್ಜೆ) ಇವರುಗಳನ್ನು ಮೇಲೆ ಓದಲಾದ (1) ರ ದಿನಾಂಕ:10.2.2012 ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಮೇಲೆ ಓದಲಾದ (2)ರ ದಿನಾಂಕ:17.5.2012 ರ ಆದೇಶದಲ್ಲಿ ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರೆ (ವಿಶೇಷ ದರ್ಜೆ) ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖೆ ವಿಚಾರಣೆ ಬಾಕಿ ಇರಿಸಿ, ಅವರ ಅಮಾನತ್ತು ತೆರವುಗೊಳಿಸಿ, ಸೇವೆಯಲ್ಲಿ ಪುನರ್ ಸ್ಥಾಪಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರ (ವಿಶೇಷ ದರ್ಜೆ) ಇವರುಗಳು ಮನವಿ ಸಲ್ಲಿಸಿ, ಅವರು ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಅವರ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸಿ, ಮಂಜೂರು ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಈ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿರುತ್ತದೆ. ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಇವರುಗಳು ಅಮಾನತ್ತಿನಲ್ಲಿ ಕಳೆದಿರುವ ಅವಧಿ ದಿನಾಂಕ: 10.2.2012 ರಿಂದ 17.5.2012

---2

ರವರಗಿನ ಅವಧಿಗೆ ಅವರ ಹಕ್ಕಿನಲ್ಲಿರಿವ ರಜೆಯನ್ನು ಮಂಜೂರು ಮಾಡಲು ತೀರ್ಮಾನಿಸಿರುತ್ತದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 312 ಸೇಶಿಕಾ 2016, ಬೆಂಗಳೂರು, ದಿ:13.01.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ, ಸರ್ಕಾರವು ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಇವರುಗಳು ಅಮಾನತ್ತಿನಲ್ಲಿ ಕಳೆದಿರುವ ಅವಧಿ ದಿನಾಂಕ: 10.2.2012 ರಿಂದ 17.5.2012 ರವರಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮ 100(7) ರನ್ವಯ ಅವರ ಲೆಕ್ಕದಲ್ಲಿರುವ ಗಳಿಕೆ ರಜೆ ಎಂದು ಪರಿಗಣಿಸಿ, ಮಂಜೂರು ಮಾಡಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೊತಲಕಟ್ಟೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಎ ಮತ್ತು ಇ,) ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
4. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ.(ಸೇವೆಗಳು- ಎ ಮತ್ತು ಸಿ ಶಾಖೆ)
5. ಸಂಬಂಧಿಸಿದ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಮುಖಾಂತರ)
6. ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
7. ಜಂಟಿ ಕಾರ್ಯದರ್ಶಿ/ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ, ಹೆಚ್ಚುವರಿ ಪ್ರತಿ, ಕಂಪ್ಯೂಟರ್ ಸೆಲ್